ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 24/9/20

# ಕೈಗಾರಿಕಾ ಸೌಲಭ್ಯ ತಿದ್ದುಪಡಿಗೆ ಒಪ್ಪಿಗೆ

ಕೈಗಾರಿಕೆಗಳ ಆರಂಭಕ್ಕೆ ರಾಜ್ಯದಲ್ಲಿ ಉತ್ತೇಜನ ನೀಡುವ ಕೈಗಾರಿಕಾ ಸೌಲಭ್ಯ ತಿದ್ದುಪಡಿ ವಿಧೇಯಕಕ್ಕೆ ವಿಧಾನಸಭೆ ಒಪ್ಪಿಗೆ ನೀಡಿದೆ. ವಿಧೇಯಕ ಮಂಡಿಸಿದ ಕೈಗಾರಿಕೆ ಸಚಿವ ಜಗದೀಶ್ ಶೆಟ್ಟರ್, ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ವಿವಿಧ ಇಲಾಖೆಗಳಿಂದ ಅನುಮತಿ ಪಡೆಯಲು ಸಮಸ್ಯೆ ಆಗುತ್ತಿರುವುದರಿಂದ ಈಸ್ ಆಫ್ ಡುಯಿಂಗ್ ವ್ಯವಸ್ಥೆಯಡಿ ಕೈಗಾರಿಕಾ ಸ್ನೇಹಿಯನ್ನಾಗಿ ಮಾಡಲು ಕಾನೂನು ತಿದ್ದುಪಡಿ ಮಾಡಲು ಅಗತ್ಯವಿತ್ತು ಎಂದರು.

## ವಿವಾದ ವಿಧೇಯಕ ಮೇಲೆ ಚರ್ಚೆ

ವಿಪುಲ ಉದ್ಯೋಗಾವಕಾಶಗಳ ಸೃಷ್ಟಿ, ಆರ್ಥಿಕ ಚಟುವಟಿಕೆಗೆ ಉತ್ತೇಜನ ಹಾಗೂ ಅಭಿವೃದ್ಧಿಗೆ ಹೊಸ ಆಯಾಮ ನೀಡಲಿದೆ ಎಂದೇ ಬಿಂಬಿತ ವಿಶೇಷ ಆರ್ಥಿಕ ವಲಯ (ಎಸ್ಇಝಡ್)ಗಳ ಸಾಧನೆ, ಕನ್ನಡಿಗರಿಗೆ ಉಪಯೋಗವಾಗಿದ್ದರ ಕುರಿತು 'ಹಿರಿಯರ ಮನೆ' ಬುಧವಾರ ಒರೆಗಲ್ಲಿಗೆ ಹಚ್ಚಿತು. ವಿಧಾನಪರಿಷತ್‌ನಲ್ಲಿ ಕಾರ್ಮಿಕ ಸಚಿವ ಶಿವರಾಮ್ ಹೆಬ್ಬಾರ್ ಕೈಗಾರಿಕಾ ವಿವಾದಗಳ (ಕರ್ನಾಟಕ ತಿದ್ದುಪಡಿ) ವಿಧೇಯಕ-2020 ಅನ್ನು ಮಂಡಿಸಿದರು. ಗಂಭೀರ ಚರ್ಚೆಯಲ್ಲಿ ನೀಡಿದ ಸಲಹೆಗಳನ್ನು ಕಾನೂನು ರೂಪಿಸುವ ಸಂದರ್ಭ ಪರಿಗಣಿಸಲಾಗುವುದು ಎಂದು ಭರವಸೆ ನೀಡಿದರು. ನಂತರ ಸದನದ ಒಪ್ಪಿಗೆ ಪಡೆದು, ಸಭಾಪತಿ ಕೆ.ಪ್ರತಾಪಚಂದ್ರ ಶೆಟ್ಟಿ ಅಂಗೀಕರಿಸಿದರು.

## ಭೂ ಸುಧಾರಣೆ ಬಗ್ಗೆ ಇಂದು ಚರ್ಚೆ

ವಿವಾದಾತ್ಮಕ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ತಿದ್ದುಪಡಿ ವಿಧೇಯಕ ವಿಧಾನಸಭೆಯಲ್ಲಿ ಮಂಡನೆಯಾಗಿದೆ. ರೈತರು ಎಪಿಎಂಸಿಯಲ್ಲೇ ಕೃಷಿ ಉತ್ಪನ್ನವನ್ನು ಮಾರಾಟ ಮಾಡಬೇಕೆಂಬ ನಿಯಮ ಸಡಿಲಿಸಿ ಮುಕ್ತಮಾರುಕಟ್ಟೆಗೆ ಅವಕಾಶ ಮಾಡಿಕೊಡುವ ತಿದ್ದುಪಡಿಯನ್ನು ಗುರುವಾರ ಮಂಡಿಸಲಿದೆ. ಈಗಾಗಲೇ ಅಧ್ಯಾದೇಶದ ಮೂಲಕ ಕಾನೂನು ಜಾರಿಯಲ್ಲಿದ್ದು, ಕಾನೂನು



ರೂಪ ಕೊಡುವ ಶಿಷ್ಟಾಚಾರದಂತೆ ವಿಧಾನಸಭೆಯಲ್ಲಿ ವಿಧೇಯಕ ಮಂಡಿಸಲಿದೆ. ಹಾಗೆಯೇ ಭೂ ಸುಧಾರಣೆ ಕಾಯ್ದೆ ಪರ್ಯಾಲೋಚನೆಗೆ ಕಂದಾಯ ಸಚಿವರು ಮುಂದಾದಾಗ, ಗುರುವಾರ ಚರ್ಚೆಗೆ ತೆಗೆದುಕೊಳ್ಳೋಣ ಎಂದು ಸಿದ್ದರಾಮಯ್ಯ ಸರ್ಕಾರಕ್ಕೆ ಸಲಹೆ ನೀಡಿದರು.

**ಮೇಲ್ಮನೆಯಲ್ಲಿ ಅಂಗೀಕಾರ:** ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರಗಳ ಕುರಿತು ಕೇಂದ್ರ ಸರ್ಕಾರ ಹೊರಡಿಸಿರುವ ಅಧಿಸೂಚನೆ ಪ್ರಕಾರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ-2020 ಮೇಲ್ಮನೆಯಲ್ಲಿ ಮಂಡಿಸಿ, ಕಾಯ್ದೆಯ ಕರಡು ಪರಿಷ್ಕರಣೆಗೆ ಅನುಮೋದನೆ ಪಡೆಯಲಾಯಿತು. ಸಹಕಾರಿ ಸಚಿವ ಎಸ್.ಟಿ. ಸೋಮಶೇಖರ್ ವಿಧೇಯಕ ಮಂಡಿಸಿದ್ದಾರೆ.